ವಿಜಯ ಕರ್ನಾಟಕ

# ರಾಜ್ಯದಲ್ಲಿ ಶಿಶು ಮರಣ ಪ್ರಮಾಣ ಇಳಿಕೆ

Jun 12, 2016, 09.00 AM IST

**ಮೈಸೂರು:** ಇತರೆ ರಾಜ್ಯಗಳಿಗೆ ಹೋಲಿಸಿದರೆ ಕರ್ನಾಟಕದಲ್ಲಿ 2015-16ನೆಯ ಸಾಲಿನಲ್ಲಿ ಶಿಶು ಮರಣ ಪ್ರಮಾಣ ಇಳಿಕೆಯಾಗಿದೆ ಎಂದು ಕರ್ನಾಟಕ ಸರಕಾರ ಯೋಜನೆ, ಕಾರ್ಯಕ್ರಮ ಸಂಯೋಜನೆ, ಸಾಂಖ್ಯಿಕ ಇಲಾಖೆಯ ಪ್ರಧಾನ ಕಾರ್ಯದರ್ಶಿ ಉಮಾ ಮಹದೇವನ್ ತಿಳಿಸಿದರು.

ಮೈಸೂರಿನ ಹೆಬ್ಬಾಳು ವರ್ತುಲ ರಸ್ತೆಯಲ್ಲಿರುವ ವಿವೇಕನಂದ ಇನ್‌ಸ್ಟಿಟ್ಯೂಟ್ ಫಾರ್ ಲೀಡರ್‌ಶೀಪ್ ಡೆವಲಪ್‌ಮೆಂಟ್(ವೀ ಲೀಡ್) ಸಂಸ್ಥೆ ವತಿಯಿಂದ ಆಯೋಜಿಸಿದ್ದ ಕಾರ್ಯನೀತಿ ವಿಶ್ಲೇಷಣೆ ಮತ್ತು ಮೌಲ್ಯ ಮಾಪನ ಕಾರ್ಯಾಗಾರ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

ರಾಜ್ಯದಲ್ಲಿ 2013ರ ಅವಧಿಯಲ್ಲಿ ಶಿಶು ಮರಣ ಸಂಖ್ಯೆ ಸರಾಸರಿ 1000ಕ್ಕೆ 31 ಇತ್ತು. ಆದರೆ 2015-16 ನೇ ಸಾಲಿನಲ್ಲಿ ಸಮೀಕ್ಷೆಯ ಪ್ರಕಾರ ಸರಾಸರಿ 28ಕ್ಕೆ ಇಳಿದಿದೆ. ಕರ್ನಾಟಕ ಸರಕಾರ ಶಿಶು ಮರಣದ ಬಗ್ಗೆ ಕೈಗೊಂಡಿರುವ ಕ್ರಮಗಳು ಉತ್ತಮವಾಗಿರುವುದರಿಂದ ಮಕ್ಕಳ ಸಾವಿನ ಸಂಖ್ಯೆಯಲ್ಲಿ ಇಳಿಮುಖವಾಗಿದೆ. ಮುಂದೆಯೂ ಶಿಶು ಮರಣ ಆದಷ್ಟು ಕಡಿಮೆ ಮಾಡಲು ಕ್ರಮ ಕೈಗೊಳ್ಳಲಾಗುವುದು ಎಂದರು.

ಕ್ಷೀರಭಾಗ್ಯಕ್ಕೆ ಉತ್ತಮ ಪ್ರತಿಕ್ರಿಯೆ: ದೇಶದಲ್ಲಿಯೇ ಮೊದಲ ಬಾರಿಗೆ ರಾಜ್ಯ ಸರಕಾರ ತಂದಿರುವ ಕ್ಷೀರಭಾಗ್ಯ ಯೋಜನೆಗೆ ಉತ್ತಮ ಪ್ರತಿಕ್ರಿಯೆ ದೊರೆತಿದೆ ಎನ್ನುವುದು ಸಮೀಕ್ಷೆಯಿಂದ ತಿಳಿದು ಬಂದಿದೆ. ಶಾಲಾ ಮಕ್ಕಳಿಂದ, ಶಿಕ್ಷಕರಿಂದ ಮತ್ತು ಮಕ್ಕಳ ಪೋಷಕರಿಂದ ಈ ಬಗ್ಗೆ ಮಾಹಿತಿ ಪಡೆಯಲಾಗಿದೆ. ಹಾಗೇ ಅಂಗನವಾಡಿಯಲ್ಲಿ ಕಾರ್ಯನಿರ್ವಹಿಸುವ ಕಾರ್ಯಕರ್ತೆಯರಿಂದ ಮತ್ತು ಪೋಷಕರಿಂದಲೂ ಮಾಹಿತಿ ಸಂಗ್ರಹಿಸಲಾಗಿದೆ. ಅವರಿಂದ ಉತ್ತಮ ಪ್ರತಿಕ್ರಿಯೆ ಬಂದಿದೆ ಎಂದರು.

ಗ್ರಾಮ್ ಕಾರ್ಯನಿರ್ವಾಹಕ ನಿರ್ದೇಶಕ ಆರ್. ಬಸವರಾಜು ಅವರು ಮಾತನಾಡಿ, ಈ ಕಾರ್ಯಾಗಾರದಲ್ಲಿ ವಿವಿಧ ರಾಜ್ಯಗಳಿಂದ ವಿಜ್ಞಾನಿಗಳು ಆಗಮಿಸಿದ್ದರು. ಅಥಿಯೆರಿ ಡ್ರಿವನ್ ಮೌಲ್ಯಮಾಪನ, ಫಾರ್ಮೇಟಿವ್ ಮತ್ತು ಸಮ್ಮೇಟಿವ್ ಮೌಲ್ಯಮಾಪನ ವಿಧಾನಗಳು, ಫಿಡೆಲಿಟಿ ವಿಶ್ಲೇಷಣೆ ಮತ್ತು ಕಾರ್ಯಕ್ರಮಗಳು ಬಯಸುವ ಬದಲಾವಣೆಗಳ ಸಿದ್ಧಾಂತ ಸೇರಿದಂತೆ ಕಾರ್ಯಕ್ರಮಕ್ಕೆ ಸಂಬಂಧಿಸಿದ ವಿಷಯಗಳ ಬಗ್ಗೆ ಕಾರ್ಯಕ್ರಮದಲ್ಲಿ ಚರ್ಚಿಸಲಾಯಿತು ಎಂದರು.

ಗ್ರಾಮ್ ಅಧ್ಯಕ್ಷ ಅಧ್ಯಕ್ಷ ಡಾ.ಆರ್.ಬಾಲಸುಬ್ರಮಣ್ಯಂ, ಎಂಪ್ಲಾಯ್‌ಮೆಂಟ್ ಅಂಡ್ ಡಿಸೆಬಿಲಿಟಿ ಇನ್‌ಸ್ಟಿಟ್ಯೂಟ್ ಉಪನ್ಯಾಸಕ ಡಾ.ಅರುಣ್ ಕಪೂರ್ ಇದ್ದರು. ಕಾರ್ಯಾಗಾರದಲ್ಲಿ ಭಾಗವಹಿಸಿದ್ದ ಶಿಬಿರಾರ್ಥಿಗಳು ತಮ್ಮ ಅನುಭವ ಹಂಚಿಕೊಂಡರು.